ಕರ್ನಾಟಕ ಸರ್ಕಾರ

ಸಂಖ್ಯೆ: ಡಿಪಿಎಆರ್ 1 ಎಸ್ಎಂಆರ್ 2004

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 20-8-2004.

## ಸು ತ್ತೋ ಲೆ

ವಿಷಯ: ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ವೈದ್ಯಕೀಯ ಚಿಕಿತ್ಸೆ ಪಡೆಯಲು ಸರ್ಕಾರ ಮಾನ್ಯತೆ ನೀಡಿ ಗುರುತಿಸಿರುವ ಖಾಸಗಿ ಆಸ್ಪತ್ರೆಗಳಲ್ಲಿನ ಚಿಕಿತ್ಸೆಯ ದರಗಳ ಕುರಿತು ಸ್ಪಷ್ಟೀಕರಣ.

ಉಲ್ಲೇಖ: ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 1 ಎಸ್ಎಂಆರ್ 2000, ದಿನಾಂಕ 22-1-2001.

***

ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963 ರಲ್ಲಿ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರುಗಳ ವೈದ್ಯಕೀಯ ಚಿಕಿತ್ಸೆಯ ವೆಚ್ಚವನ್ನು ಮರುಪಾವತಿಸಿಕೊಳ್ಳುವ ಅವಕಾಶ ಕಲ್ಪಿಸಲಾಗಿರುತ್ತದೆ.

ಸರ್ಕಾರಿ ಆಸ್ಪತ್ರೆಗಳ ಜೊತೆಗೆ ಕೆಲವು ಸುಸಜ್ಜಿತ ಖಾಸಗಿ ಆಸ್ಪತ್ರೆಗಳನ್ನು ಹಾಗೂ ಡಯೋಗ್ನಾಸ್ಟಿಕ್ ಕೇಂದ್ರಗಳನ್ನು ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ಚಿಕಿತ್ಸೆ ಪಡೆಯಲು ಮಾನ್ಯ ಮಾಡಿ ಗುರುತಿಸಲಾಗಿದೆ. ಹೀಗೆ ಗುರುತಿಸಿರುವ ಖಾಸಗಿ ಆಸ್ಪತ್ರೆಗಳು ನೀಡುವ ಚಿಕಿತ್ಸೆಯ ದರಗಳನ್ನು ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 1 ಎಸ್ಎಂಆರ್ 2000, ದಿನಾಂಕ 22-1-2001 ರಲ್ಲಿ ನಿಗದಿಪಡಿಸಲಾಗಿರುತ್ತದೆ. ಆದರೆ ಕೆಲವು ಖಾಸಗಿ ಆಸ್ಪತ್ರೆಗಳು ಮೇಲ್ಕಂಡ ಅಧಿಸೂಚನೆಯಲ್ಲಿ ನಿಗದಿಪಡಿಸಿರುವ ದರಗಳಿಗಿಂತ ಹೆಚ್ಚಿನ ದರಗಳನ್ನು ವಿಧಿಸಿ ಚಿಕಿತ್ಸೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿರುತ್ತದೆ.

ದಿನಾಂಕ 22-1-2001 ರ ಅಧಿಸೂಚನೆಯಲ್ಲಿ ಸರ್ಕಾರಿ ನೌಕರರ ವೈದ್ಯಕೀಯ ಚಿಕಿತ್ಸೆಗೆ ನಿಗದಿಪಡಿಸಿದ ದರಗಳಿಗಿಂತ ಹೆಚ್ಚಿನ ದರಗಳನ್ನು ಯಾವುದೇ ಮಾನ್ಯ ಮಾಡಲಾದ (recognized) ಆಸ್ಪತ್ರೆ ವಿಧಿಸಿದಲ್ಲಿ, ಆ ಬಗ್ಗೆ ಸಂಬಂಧಿಸಿದ ಸರ್ಕಾರಿ ನೌಕರರುಗಳು ತಮ್ಮ ಇಲಾಖಾ ಮುಖ್ಯಸ್ಥರ ಮೂಲಕ ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು-560 009, ಇವರ ಗಮನಕ್ಕೆ ತರುವಂತೆ ಈ ಮೂಲಕ ಸೂಚಿಸಿದೆ.

ಮೇಲ್ಕಂಡ ಸೂಚನೆಗಳನ್ನು ತಮ್ಮ ಇಲಾಖೆಯ ಅಧಿಕಾರಿ / ನೌಕರರ ಗಮನಕ್ಕೆ ತರಬೇಕೆಂದು ಎಲ್ಲಾ ಇಲಾಖಾ ಮುಖ್ಯಸ್ಥರನ್ನು ಕೋರಿದೆ.

(ಕೆ.ರಘುರಾಮ್ ಭಂಡಾರಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು).

ಇವರಿಗೆ,

ಸಂಕಲನಾಧಿಕಾರಿ, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇದನ್ನು ಕರ್ನಾಟಕ ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು ಪ್ರಕಟಿತಗೊಂಡ 1000 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ-2, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು), ವಿಧಾನ ಸೌಧ, ಬೆಂಗಳೂರು ಇವರಿಗೆ ಒದಗಿಸುವಂತೆ ಕೋರಿದೆ.

<u>ಪ್ರತಿಗಳು</u> :

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿ,ಆರ್ಥಿಕ ಇಲಾಖೆ/ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಇಲಾಖೆ/ಬಂಡವಾಳ ಹಿಂತೆಗೆತ ಮತ್ತು ಸಾರ್ವಜನಿಕ ಉದ್ಯಮಗಳ ಸುಧಾರಣಾ ಇಲಾಖೆ.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿ, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
6. ಎಲ್ಲಾ ಇಲಾಖಾ ಮುಖ್ಯಸ್ಥರು / ಎಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
8. ಸರ್ಕಾರದ ಎಲ್ಲ ಅಪರ / ಸಹ / ಉಪ / ಅಧೀನ ಕಾರ್ಯದರ್ಶಿಗಳು.

* 9. ಮಹಾ ನಿಬಂಧಕರು, ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
*10. ನಿಬಂಧಕರು, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
*11. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
*12. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಪಾರ್ಕ್ ಹೌಸ್, ಬೆಂಗಳೂರು.
*13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ ವಿಧಾನ ಪರಿಷತ್ತು, ಬೆಂಗಳೂರು.

14. ಮಹಾಲೇಖಪಾಲರು, ಕರ್ನಾಟಕ (ಅಕೌಂಟ್ಸ್/ಆಡಿಟ್), ಬೆಂಗಳೂರು.
15. ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ಮುಖ್ಯ ಮಂತ್ರಿಯವರ ಸಚಿವಾಲಯ, ಬೆಂಗಳೂರು.
16. ರಾಜ್ಯದ ಎಲ್ಲ ಜಿಲ್ಲಾ ಶಸ್ತ್ರ ಚಿಕಿತ್ಸಕರು.
17. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಪಾರ್ಕ್, ಬೆಂಗಳೂರು.
18. ವಾರದ ಗೆಜೆಟ್.
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

(* ಮುಖಪತ್ರದೊಂದಿಗೆ).

ಶ್ರೀ.